## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

## ಸಿಸಿ ನಂ. 1784/2021

ಚಾಸಾ- 2 ಪ್ರಾಸಾ-2

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ ಪಡೆದುಕೊಳ್ಳಲಾಯಿತು.
ದಿನಾಂಕ: 10-11-2025

| | | |
|---|---|---|
| ಹೆಸರು | : | ಶಿವಪ್ಪ |
| ತಂದೆಯ ಹೆಸರು | : | ಗಿರಿಮಲ್ಲಪ್ಪ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | : | ಅಫಜಲಪುಾರ |

-: **ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-**

ಚಾಸಾ 3 ಪರಿಚಯ ಇರುತ್ತದೆ.

ಸಾಕ್ಷಿಗೆ ಜಪ್ತಿ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಜಪ್ತಿ ಪಂಚನಾಮೆಯನ್ನು ನಿಪಿ-**1** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**1**(ಎ) ಎಂದು ಗುರುತಿಸಲಾಯಿತು.

ಈಗ ಸುಮಾರು ವರ್ಷಗಳ ಹಿಂದೆ ನಾನು ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ, ನಾನು ಒಂದು ದಿನ ಪೋಲಿಸ ಠಾಣೆ ಕಡೆ ಹೋದಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 19-05-2020 ರಂದು ರಾತ್ರಿ 8-40 ಕ್ಕೆ ಪೋಲಿಸರು ನನಗೆ ಮತ್ತು ಚಾಸಾ 3 ರವರಿಗೆ ಕರೆಸಿ ತಮಗೆ ಬಂದ ಭಾತ್ಮಿ ಬಗ್ಗೆ ತಿಳಿಸಿ ಅಬಕಾರಿದಾಳಿ ಮಾಡಲು ಜೇವರ್ಗಿ ಬಿ. ಗ್ರಾಮದ ಬಸ ನಿಲ್ದಾಣದ ಹತ್ತಿರ ನಮ್ಮನ್ನು ಕರೆದುಕೊಂಡು ಹೋಗಿರುತ್ತಾನೆ ಎಂದರೆ ಸರಿಯಲ್ಲ. ಅಲ್ಲಿ ಒಬ್ಬ ವ್ಯಕ್ತಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದು ಆತನ ಮೇಲೆ ದಾಳಿ ಮಾಡಿ ಆತನಿಂದ ಮದ್ಯದ ಪಾಕೆಟುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಪ್ರಕರಣ ಕುರಿತು ಮಾಹಿತಿ ಇದ್ದರೂ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **DBP** ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ